Kerala Gazette No. 6 dated 9th February 2021.

**PART I** **Section iii**

# ಕೇರಳ ಸರಕಾರ

ಕಾನೂನು (ಶಾಸನ ರಚನೆ-ಎಚ್) ಇಲಾಖೆ

## ಅಧಿಸೂಚನೆ

*2018 ಅಕ್ಟೋಬರ್ 5,*

ನಂಬ್ರ 20842/ಲೆಗ್. ಎಚ್2/2018/ಕಾನೂನು. *ತಿರುವನಂತಪುರಂ,* *1194 ಕನ್ಯಾ 19/*

*1940 ಅಶ್ವಯುಜ 13.*

2018 ಅಕ್ಟೋಬರ್ 5ನೇ ದಿನಾಂಕದಂದು ಕೇರಳ ರಾಜ್ಯಪಾಲರು ಪ್ರಖ್ಯಾಪಿಸಿದಂತಹ ಈ ಕೆಳಗಿನ ಅಧ್ಯಾದೇಶವನ್ನು ಸಾರ್ವಜನಿಕರ ತಿಳುವಳಿಕೆಗಾಗಿ ಈ ಮೂಲಕ ಪ್ರಕಟಿಸಲಾಗಿದೆ.

ರಾಜ್ಯಪಾಲರ ಆಜ್ಞಾಪ್ರಕಾರ,

**ಬಿ. ಜಿ. ಹರೀಂದ್ರನಾಥ್,**

*ಕಾನೂನು ಕಾರ್ಯದರ್ಶಿ.*

## 2018ರ 51ನೇ ನಂಬ್ರ ಅಧ್ಯಾದೇಶ

## 2018ರ ಕೇರಳ ಸಹಕಾರಿ ಸಂಘಗಳ (ಮೂರನೇ ತಿದ್ದುಪಡಿ) ಅಧ್ಯಾದೇಶ

ಭಾರತ ಗಣರಾಜ್ಯದ ಅರುವತ್ತೊಂಭತ್ತನೇ ವರ್ಷದಲ್ಲಿ ಕೇರಳ ರಾಜ್ಯಪಾಲರಿಂದ ಪ್ರಖ್ಯಾಪಿಸಲ್ಪಟ್ಟಿತು.

1969ರ ಕೇರಳ ಸಹಕಾರಿ ಸಂಘಗಳ ಅಧಿನಿಯಮವನ್ನು ಮತ್ತಷ್ಟು ತಿದ್ದುಪಡಿಮಾಡುವುದಕ್ಕಿರುವ

ಒಂದು

ಅಧ್ಯಾದೇಶ

ಪೀಠಿಕೆ—1969ರ ಕೇರಳ ಸಹಕಾರಿ ಸಂಘಗಳ ಅಧಿನಿಯಮ (1969ರ 21)ವನ್ನು ಇನ್ನು ಮುಂದಿನ ಅಗತ್ಯಗಳಿಗಾಗಿ ಮತ್ತಷ್ಟು ತಿದ್ದುಪಡಿಮಾಡುವುದು ಯುಕ್ತವಾಗಿರುವುದರಿಂದಲೂ;

ಕೇರಳ ರಾಜ್ಯ ವಿಧಾನ ಸಭೆಯು ಅಧಿವೇಶನದಲ್ಲಿಲ್ಲದಿರುವುದರಿಂದಲೂ ತಾನು ತುರ್ತುಕ್ರಮ ಕೈಗೊಳ್ಳುವ ಅವಶ್ಯಕ ಸನ್ನಿವೇಶವು ಅಸ್ತಿತ್ವದಲ್ಲಿದೆ ಎಂದು ಕೇರಳ ರಾಜ್ಯಪಾಲರಿಗೆ ಮನವರಿಕೆಯಾಗಿರುವುದರಿಂದಲೂ;

ಈಗ, ಆದುದರಿಂದ, ಭಾರತ ಸಂವಿಧಾನದ 213ನೇ ಅನುಚ್ಛೇದದ (1)ನೇ ಖಂಡ ಪ್ರಕಾರ ನೀಡಲ್ಪಟ್ಟ ಅಧಿಕಾರಗಳನ್ನು ವಿನಿಯೋಗಿಸಿ ಕೇರಳ ರಾಜ್ಯಪಾಲರು ಈ ಕೆಳಗಿನ ಅಧ್ಯಾದೇಶವನ್ನು ಪ್ರಖ್ಯಾಪಿಸುವರು:—

1. ಸಣ್ಣ ಹೆಸರು ಮತ್ತು ಪ್ರಾರಂಭ.—(1) ಈ ಅಧ್ಯಾದೇಶವನ್ನು 2018ರ ಕೇರಳ ಸಹಕಾರಿ ಸಂಘಗಳ (ಮೂರನೇ ತಿದ್ದುಪಡಿ) ಅಧ್ಯಾದೇಶವೆಂದು ಕರೆಯಬಹುದು.

(2) ಇದು ಕೂಡಲೇ ಜಾರಿಗೆ ಬರುವುದಾಗಿದೆ.

2. ತಾತ್ಕಾಲಿಕವಾಗಿ ತಿದ್ದುಪಡಿ ಮಾಡಬೇಕಾದ 1969ರ 21ನೇ ಅಧಿನಿಯಮ.—ಈ ಅಧ್ಯಾದೇಶವು ಅಸ್ತಿತ್ವದಲ್ಲಿರುವ ಕಾಲಾವಧಿಯಲ್ಲಿ, 1969ರ ಕೇರಳ ಸಹಕಾರಿ ಸಂಘಗಳ ಅಧಿನಿಯಮ (1969ರ 21) (ಇನ್ನು ಮುಂದೆ ಪ್ರಧಾನ ಅಧಿನಿಯಮವೆಂದು ಉಲ್ಲೇಖಿಸಲ್ಪಡುವುದು)ಕ್ಕೆ 3ನೇ ವಿಭಾಗದಲ್ಲಿ ನಿರ್ದಿಷ್ಟಪಡಿಸಿರುವ ತಿದ್ದುಪಡಿಗಳಿಗನುಸಾರವಾಗಿ ಪ್ರಾಬಲ್ಯವಿರುವುದಾಗಿದೆ.

3. 28ನೇ ವಿಭಾಗದ ತಿದ್ದುಪಡಿ.—ಪ್ರಧಾನ ಅಧಿನಿಯಮದ 28ನೇ ವಿಭಾಗದಲ್ಲಿ, (1ಜೆ) ಉಪ-ವಿಭಾಗದ ನಂತರ, ಈ ಕೆಳಗಿನ ಉಪ-ವಿಭಾಗವನ್ನು ಸೇರಿಸತಕ್ಕದ್ದು, ಅದೇನೆಂದರೆ:—

"(1ಕೆ) ಈ ಅಧಿನಿಯಮದಲ್ಲಿ ಅಥವಾ ಅದರ ಕೆಳಗೆ ರಚಿಸಿದ ನಿಯಮಗಳಲ್ಲಿ ಅಥವಾ ಉಪ-ಕಾನೂನುಗಳಲ್ಲಿ ಏನೇ ಒಳಗೊಂಡಿದ್ದರೂ, ಒಂದಕ್ಕಿಂತ ಹೆಚ್ಚು ಕಂದಾಯ ಜಿಲ್ಲೆಯಲ್ಲಿ ಅಧಿಕಾರ ವ್ಯಾಪ್ತಿಯಿರುವ ಒಂದು ಪ್ರಾದೇಶಿಕ ಕ್ಷೀರ ಉತ್ಪಾದಕರ ಒಕ್ಕೂಟದಲ್ಲಿ, ಪ್ರತಿಯೊಂದು ಕಂದಾಯ ಜಿಲ್ಲೆಯನ್ನು ಪ್ರತಿನಿಧಿಸುವ ಸಮಿತಿಯ ಸದಸ್ಯರುಗಳನ್ನು ಅಂತಹ ನಿರ್ದಿಷ್ಟ ಕಂದಾಯ ಜಿಲ್ಲೆಯ ಸದಸ್ಯ ಸಂಘಗಳು ಸ್ವತಃ ತಮ್ಮೊಳಗಿನಿಂದ ಚುನಾಯಿಸಿರತಕ್ಕದ್ದು.".

**ಪಿ. ಸದಾಶಿವಂ,**

ರಾಜ್ಯಪಾಲರು.